**ಕರ್ನಾಟಕ ಸರ್ಕಾರ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಮ್ಎಫ್‌ಸಿ ನ್ಯಾಯಾಲಯ, ದೇವನಹಳ್ಳಿ**

**ಸಿಸಿ ನಂ. 2672/2018**

| | |
|---|---|
| ಹೆಸರು | ಃ ನಾಗೇಶ್ |
| ತಂದೆಯ ಹೆಸರು | ಃ ವೆಂಕಟೇಶ್ |
| ವಯಸ್ಸು | ಃ 40 |
| ಉದ್ಯೋಗ | ಃ ವ್ಯವಸಾಯ |
| ವಾಸ | ಃ ಲಾಲಗೊಂಡೇನಹಳ್ಳಿ. |

CW-6, PW-4

**<u>ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು, ದಿನಾಂಕ. 17.02.2024</u>**

**<u>ಮುಖ್ಯ ವಿಚಾರಣೆ ಃ ಎಪಿಪಿಯುವರಿಂದಃ</u>**

ಸಾಕ್ಷಿಗೆ ಈಗ ನಿಪಿ-3 ನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಾಕ್ಷಿಯ ಸಹಿಯನ್ನು ಅದನ್ನು 3(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಪೋಲಿಸ್ ಠಾಣೆಯಲ್ಲಿ ಸುಮಾರು 4 ವರ್ಷಗಳ ಹಿಂದೆ ಮಾಡಿರುತ್ತೆನೆ. ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ವಸ್ತುಗಳನ್ನು ಸ್ವಾಧೀನ ಪಡಿಸಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ, ವಿನಂತಿಸಿದ್ದು, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ</u>**

ದಿಃ27.02.2018 ರಂದು ಪೋಲಿಸರು ನನ್ನನ್ನು ಮತ್ತು ಚಾಸಾ-5 ರವರನ್ನು ಬೊಮ್ಮೆನಹಳ್ಳಿ ಕ್ರಾಸ್ ಬಳಿಗೆ ಮಹಜರ್ ಗೆ ಕರೆದಿದ್ದರು ಎಂದರೆ ಸರಿಯಲ್ಲ. ಸದರಿ ಸ್ಥಳವನ್ನು ಚಾಸಾ-1 ರವರು ಪೋಲಿಸರಿಗೆ ತೋರಿಸಿದ್ದರು ಎಂದರೆ ಸರಿಯಲ್ಲ. ಆ ಸ್ಥಳದಲ್ಲಿ ಚಾಸಾ-1 ರವರಿಗೆ ಚಾಕು ತೋರಿಸಿ ಚಿನ್ನ ಮತ್ತು ನಗದು ಹಣವನ್ನು ಆರೋಪಿ ಕಿತ್ತುಕೊಂಡ ಬಗ್ಗೆ ಪೋಲಿಸರು ಮಹಜರ್ ಮಾಡಿದ್ದರು ಎಂದರೆ ಸರಿಯಲ್ಲ. ಆ ರೀತಿ ಮಹಜರ್ ಮಾಡುವಾಗ ನಾನು

ಹಾಜರಿದ್ದು ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ಮರು ವಿಚಾರಣೆ ಇಲ್ಲ)**

**(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

**ಓ.ಹೇ.ಕೇ.ಸ.ಎ. ಒಪ್ಪಲಾಗಿದೆ.**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ದೇವನಹಳ್ಳಿ.**

ಈ ಹಂತದಲ್ಲಿ ಪಾಟಿ ಸವಾಲು ಮಾಡಲು ಆರೋಪಿ ಪರ ವಕೀಲರು ಕಾಲವಕಾಶ ಕೋರಿದ್ದು, ಕಾಲವಕಾಶ ನೀಡಲು ಯಾವುದೇ ಸಕಾರಣಗಳು ಇಲ್ಲದೆ ಇರುವ ಕಾರಣ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು

(ಈ ಹಂತದಲ್ಲಿ ಪಾಟಿ ಸವಾಲು ಮಾಡಲು ಆರೋಪಿ ಪರ ವಕೀಲರು ಕಾಲವಕಾಶ ಕೋರಿದ್ದು, ಕಾಲವಕಾಶ ನೀಡಲು ಯಾವುದೇ ಸಕಾರಣಗಳು ಇಲ್ಲದೆ ಇರುವ ಕಾರಣ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)

(ಈ ಹಂತದಲ್ಲಿ ಮುಂದುವರಿದ ಮುಖ್ಯ ವಿಚಾರಣೆ ಮಾಡಲು ಮಾನ್ಯ ಸಸಅ ರವರ ವಿನಂತಿಯ ಮೇರೆಗೆ ಮುಂದೂಡಲಾಯಿತು.)

(ಈ ಹಂತದಲ್ಲಿ ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಪಿಸಲು ವಿನಂತಿಸಿದ್ದು, ಮಾನ್ಯ ಸ.ಸ.ಅ ರವರ ಮನವಿಯನ್ನು ಪರಿಗಣಪಿಸಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

ಆರೋಪಿ ನನಗೆ ಪರಿಚಯ ಇರುವುದರಿಂದ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**(ಈ ಹಂತದಲ್ಲಿ ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಪಿಸಲು ವಿನಂತಿಸಿದ್ದು, ಮಾನ್ಯ ಸ.ಸ.ಅ ರವರ ಮನವಿಯನ್ನು ಪರಿಗಣಪಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**